ಯಾರಿಂದ ಬಂದರೂ ಸ್ವೀಕಾರ ಮಾಡುತ್ತೇವೆ. ಸಧ್ಯಕ್ಕೆ ಸರ್ಕಾರದಲ್ಲಿ ಹಣವಿಲ್ಲದಿರುವುದರಿಂದ ಈ ಕೆಲಸ ತೆಗೆದುಕೊಳ್ಳಲು ಸಾಧ್ಯವಾಗುವುದಿಲ್ಲ.

ಶ್ರೀ ಅಂಜನಮೂರ್ತಿ.—ಮಾನ್ಯ ಅಧ್ಯಕ್ಷರೇ, ನಿನ್ನೆಗೂ ಇವತ್ತಿಯಲ್ಲಿ ಈ ಕೋರ್ಟ್ ಸ್ಥಾಪನೆಯಾಯಿತು. ಇದು ೨೫ ಅಡಿ ಉದ್ದ ೧೫ ಅಡಿ ಅಗಲದ ಕೊಠಡಿಯಾಗಿರುತ್ತದೆ. ನಾವು ೧೦ ಜನ ಲಾಯರುಗಳಿದ್ದೇವೆ. ಅಲ್ಲಿ ಆರು ಆಸನಗಳು ಇರುತ್ತವೆ. ಒಬ್ಬರು ಒಳಗಡೆ ಹೋದರೆ ಇನ್ನೊಬ್ಬರು ಹೊರಗಡೆ ಬರಬೇಕಾದ ಸ್ಥಿತಿಯಲ್ಲಿದೆ. ಆದ್ದರಿಂದ ಸರ್ಕಾರದವರು ಕೂಡಲೇ ಕ್ರಮ ತೆಗೆದುಕೊಂಡು ಈ ಕಟ್ಟಡದ ಕೆಲಸವನ್ನು ಮಾಡಿಕೊಡುತ್ತೀರಾ ?

ಶ್ರೀ ಬಿ. ಶಿವಣ್ಣ.—ಹಣದ ಅಭಾವ ಇದೆ ಎಂದು ಹೇಳಿದ್ದೇನೆ. ಈ ಬಗ್ಗೆ ಹೈಕೋರ್ಟಿಗೆ ಲೆಟರ್ ಬರೆದಿದ್ದೇವೆ, ಪಂತ್ತು ರಿಮೈಂಡರ್ ಕೂಡ ಮಾಡಿತ್ತಿದ್ದೇವೆ. ಹಣದ ಅಭಾವ ಇರುವುದರಿಂದ ಈ ಕೆಲಸ ಸಧ್ಯಕ್ಕೆ ಆಗುವುದಿಲ್ಲ.

ಶ್ರೀ ಅಂಜನಮೂರ್ತಿ.—ಯಾವಾಗ ಆಗುತ್ತದೆ ? ಪ್ರತ್ಯೇಕ ಕೋರ್ಟ್ ಬಿಲ್ಡಿಂಗ್ ಬೇಕೆಂದು ನಾವು ಕಳೆದ ೮ ವರ್ಷಗಳಿಂದ ಪ್ರಯತ್ನ ಮಾಡುತ್ತಿದ್ದೇವೆ.

ಶ್ರೀ ಬಿ. ಶಿವಣ್ಣ.—ಈಗ ದುಡ್ಡಿಲ್ಲ, ದುಡ್ಡು ಬಂದಮೇಲೆ ನೋಡುತ್ತೇವೆ.

ಶ್ರೀ ಎಸ್. ಜಿ. ನಾಯಕ್.—ಯಾವಾಗ ದುಡ್ಡು ಬರುತ್ತದೆ ? ನಮಗೆ ಸರಿಯಾದ ಉತ್ತರ ಕೊಡಬೇಕು.

ಶ್ರೀ ಬಿ. ಶಿವಣ್ಣ.—ಪರಿಶೀಲನೆ ಮಾಡಿ ಹೇಳುತ್ತೇನೆ.

## ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ವೀರಪ್ಪ ಮೊಯಿಲಿ.—ಮಾನ್ಯ ಅಧ್ಯಕ್ಷರೇ, ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳ ಐದನೆಯ ಪಟ್ಟಿಯನ್ನು ಸಭೆಯ ಮುಂದಿಡುತ್ತೇನೆ.

## ಚಿನ್ನಪ್ಪರೆಡ್ಡಿ ವರದಿಯ ಬಗ್ಗೆ

೨೫೫. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).—ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಚಿನ್ನಪ್ಪರೆಡ್ಡಿ ಆಯೋಗದ ವರದಿಯನ್ನು ಜಾರಿಗೊಳಿಸುವಲ್ಲಿ ತಡವಾಗಲು ಕಾರಣಗಳೇನು?

ಆ) ವರದಿಯನ್ನು ಯಾವಾಗ ಜಾರಿಗೊಳಿಸಲಾಗುವುದು ?

ಶ್ರೀ ಬಿ. ಶಿವಣ್ಣ (ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು).—

ಅ) ಮತ್ತು ಆ) ಚಿನ್ನಪ್ಪ ರೆಡ್ಡಿ ಆಯೋಗದ ವರದಿಯು ಸಚಿವ ಸಂಪುಟದ ಉಪ ಸಮಿತಿಯ ಪರಿಶೀಲನೆಯಲ್ಲಿದ್ದು ಆದರ ವರದಿಯು ಬಂದನಂತರ ಮುಂದಿನ ಕ್ರಮ ಕೈಗೊಳ್ಳಲಾಗುವುದು.

## ಮಂಡಲ್ ಆಯೋಗದ ವರದಿಯ ಬಗ್ಗೆ ರಾಜ್ಯ ಸರ್ಕಾರದ ನಿಲುವಿನ ಬಗ್ಗೆ

೨೫೬. ಶ್ರೀ ಪಿ. ಜಿ. ಆರ್. ಸಿಂಧ್ಯ (ಕನಕಪುರ).—ಮಾನ್ಯ ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ.

ಅ) ಮಂಡಲ್ ಆಯೋಗದ ವರದಿಯ ಬಗ್ಗೆ ರಾಜ್ಯ ಸರ್ಕಾರದ ನಿಲುವು.

ಆ) ಈ ವಿಚಾರದಲ್ಲಿ ಸರ್ವೋಚ್ಚ ನ್ಯಾಯಾಲಯದ ಮುಂದೆ ರಾಜ್ಯ ಸರ್ಕಾರವು ತನ್ನ ನಿಲುವನ್ನು ಸ್ಪಷ್ಟಪಡಿಸುವುದೇ ?

ಶ್ರೀ ಬಿ. ಶಿವಣ್ಣ (ಕಾನೂನು ಮತ್ತು ಸಮಾಜ ಕಲ್ಯಾಣ ಸಚಿವರು).—

ಅ) ಮತ್ತು ಆ) ಮಂಡಲ್ ಆಯೋಗದ ವರದಿಯನ್ನು ಅನುಷ್ಠಾನಕ್ಕೆ ತರಲು ಕೇಂದ್ರ ಸರ್ಕಾರ ಕ್ರಮ ಕೈಗೊಂಡಿದ್ದು, ಈ ಪ್ರಕರಣವು ಭಾರತದ ಸರ್ವೋಚ್ಚ ನ್ಯಾಯಾಲಯದ ಮುಂದೆ ವಿಚಾರಣೆಯಲ್ಲಿದೆ. ಈ ಹಂತದಲ್ಲಿ ರಾಜ್ಯ ಸರ್ಕಾರದ ನಿಲುವಿನ ಬಗ್ಗೆ ಇನ್ನೂ ಅಂತಿಮ ತೀರ್ಮಾನವನ್ನು ಕೈಗೊಂಡಿರುವುದಿಲ್ಲ.